ವಿಳಾಸ : UNIREG
ದೂರವಾಣಿ ಸಂಖ್ಯೆ :2419440/2419361
ಫ್ಯಾಕ್ಸ್ ಸಂಖ್ಯೆ : 0821- 2419363/2419301

ಇಮೇಲ್ :registrar@uni-mysore.ac.in
ವೆಬ್ ಸೈಟ್: www.uni-mysore.ac.in

# ಮೈಸೂರು ವಿಶ್ವವಿದ್ಯಾನಿಲಯ

ಸ್ಥಾಪನೆ1916

ವಿಶ್ವವಿದ್ಯಾನಿಲಯ ಕಾರ್ಯಸೌಧ,
ಕ್ರಾಫರ್ಡ್‌ಭವನ, ಅಂಚೆ ಪೆಟ್ಟಿಗೆ ಸಂಖ್ಯೆ 406,
ಮೈಸೂರು-570 005.

ವಿಷಯ: 2022-23ನೇ ಶೈಕ್ಷಣಿಕ ಸಾಲಿಗೆ ಅತಿಥಿ ಉಪನ್ಯಾಸಕರನ್ನು ಆಹ್ವಾನಿಸುವ ಬಗ್ಗೆ.

ಉಲ್ಲೇಖ: 1. ವಿಶ್ವವಿದ್ಯಾನಿಲಯದ ಆದೇಶ ಸಂಖ್ಯೆ: ಇಟಿ9/186/2017-18 ದಿನಾಂಕ: 06.09.2019.
2. ಹನಿಯ ಫೆರೋಜ್, ಅತಿಥಿ ಉಪನ್ಯಾಸಕರು, ಸ್ಕೂಲ್ ಆಫ್ ಪ್ಲಾನಿಂಗ್ ಅಂಡ್ ಆರ್ಕಿಟೆಕ್ಚರ್ ವಿಭಾಗ, ಮಾನಸಗಂಗೋತ್ರಿ, ಮೈಸೂರು ಇವರ ಮನವಿಯನ್ನು ರವಾನಿಸಿರುವ ನಿರ್ದೇಶಕರು, ಸ್ಕೂಲ್ ಆಫ್ ಪ್ಲಾನಿಂಗ್ ಅಂಡ್ ಆರ್ಕಿಟೆಕ್ಚರ್, ಮಾನಸಗಂಗೋತ್ರಿ, ಮೈಸೂರು ಇವರ ಪತ್ರ ಸಂಖ್ಯೆ: SPA/146/2022-23 ದಿನಾಂಕ 20.07.2022.
3. ಮಾನ್ಯ ಕುಲಪತಿಯವರ ಆದೇಶ ದಿನಾಂಕ 26.09.2022.

*****

**ಪರಿಷ್ಕೃತ ಆದೇಶ ಸಂಖ್ಯೆ: ಇಟಿ9/231/2017-18 ದಿನಾಂಕ 20ನೇ ಅಕ್ಟೋಬರ್ 2022**

ಮಾನ್ಯ ಕುಲಪತಿಯವರ ಅನುಮೋದನೆಯ ಮೇರೆಗೆ, ಸ್ಕೂಲ್ ಆಫ್ ಪ್ಲಾನಿಂಗ್ ಅಂಡ್ ಆರ್ಕಿಟೆಕ್ಚರ್ ವಿಭಾಗ, ಮಾನಸಗಂಗೋತ್ರಿ, ಮೈಸೂರು ಇಲ್ಲಿ ಕಾರ್ಯನಿರ್ವಹಿಸುತ್ತಿರುವ ಕೆಳಕಂಡ ಅತಿಥಿ ಉಪನ್ಯಾಸಕರಿಗೆ ಉಲ್ಲೇಖ (1)ರ ಆದೇಶದಲ್ಲಿ ಈಗಾಗಲೇ ಹಂಚಿಕೆ ಮಾಡಲಾಗಿದ್ದ ಬೋಧನಾ ಕಾರ್ಯಭಾರವನ್ನು ಕೆಳಗಿನಂತೆ ಪರಿಷ್ಕರಿಸಿ ಬೋಧನಾ ಕಾರ್ಯಭಾರವನ್ನು ನಿರ್ವಹಿಸಲು ಆದೇಶ ನೀಡಲಾಗಿದೆ.

| ಅತಿಥಿ ಉಪನ್ಯಾಸಕರ ಹೆಸರು | ವಿಷಯ | ಉಲ್ಲೇಖ (1)ರ ಆದೇಶದಲ್ಲಿ ವಹಿಸಿದ್ದ ಬೋಧನಾ (ಥಿಯರಿ / ಪ್ರಾಕ್ಟಿಕಲ್) ಕಾರ್ಯಭಾರ (ಗಂಟೆಗಳಲ್ಲಿ) * | ಉಲ್ಲೇಖ (1)ರ ಆದೇಶದಲ್ಲಿ ನಿಗದಿಪಡಿಸಿದ್ದ ಮಾಹೆಯಾನ ಸಂಭಾವನೆ | ಪ್ರಸ್ತುತ ನಿಗದಿಪಡಿಸಿರುವ ಪರಿಷ್ಕೃತ ಬೋಧನಾ (ಥಿಯರಿ / ಪ್ರಾಕ್ಟಿಕಲ್) ಕಾರ್ಯಭಾರ (ಗಂಟೆಗಳಲ್ಲಿ) * | ಪರಿಷ್ಕೃತ ಸಂಭಾವನೆ ರೂ.ಗಳಲ್ಲಿ |
|---|---|---|---|---|---|
| Haniya Fairoz | ಬಿ.ಟೆಕ್ ಪ್ಲಾನಿಂಗ್ ಮತ್ತು ಎಂ.ಟೆಕ್ ಪ್ಲಾನಿಂಗ್ | 08 | ರೂ.13,000/- | 12 | ರೂ.26,400/- |

* ಬೋಧನಾ ವಿಷಯ, ಥಿಯರಿ/ಪ್ರಾಕ್ಟಿಕಲ್ ಕಾರ್ಯದ ಬಗ್ಗೆ ಸಂಬಂಧಪಟ್ಟ ವಿಭಾಗದ ನಿರ್ದೇಶಕರು ಹಂಚಿಕೆ ಮಾಡುವರು. ಎರಡು ಪ್ರಾಯೋಗಿಕ ಬೋಧನಾ ಕಾರ್ಯವು ಒಂದು ಥಿಯರಿ ಬೋಧನಾ ಕಾರ್ಯಕ್ಕೆ ಸಮಾನವಾಗಿರುತ್ತದೆ.

ಈ ವೆಚ್ಚವನ್ನು ಆಯವ್ಯಯ ಅಂದಾಜುಗಳ "ವೇತನ ಮತ್ತು ಭತ್ಯೆಗಳು" ಖಾತೆಯ "ತಾತ್ಕಾಲಿಕ ಅಧ್ಯಾಪಕರ ವೇತನ" (ಕೋಡ್ 228) ಶೀರ್ಷಿಕೆಯಿಂದ ಭರಿಸಬಹುದಾಗಿದೆ.

**ಷರತ್ತುಗಳು:**

ಅ. ಪ್ರತಿ ವಾರದಲ್ಲಿ 12 ಗಂಟೆಗಳ ಬೋಧನಾ ಕಾರ್ಯ ನಿರ್ವಹಿಸಲು ಆಹ್ವಾನಿತವಾಗಿರುವ ಅತಿಥಿ ಉಪನ್ಯಾಸಕರುಗಳು ಪ್ರತಿದಿನ ಸಂಬಂಧಪಟ್ಟ ವಿಭಾಗದ ನಿರ್ದೇಶಕರು ಕೆಲಸದ ಪೂರ್ಣಾವಧಿಯಲ್ಲಿ ಕಡ್ಡಾಯವಾಗಿ ಉಪಸ್ಥಿತರಿದ್ದು, ವಿದ್ಯಾರ್ಥಿಗಳ ಮಾರ್ಗದರ್ಶನಕ್ಕೆ ಲಭ್ಯವಿರಬೇಕು ಹಾಗೂ ಸರ್ಕಾರದ ಸುತ್ತೋಲೆ ಸಂಖ್ಯೆ: ಕಾಶಿಇ/44/ಅಉನೇ/2012-13ನೇ ಪಾವಿ-1, ದಿನಾಂಕ 02-07-2013ರ ಪ್ರಕಾರ ಕಾರ್ಯನಿರ್ವಹಿಸಬೇಕಾಗಿರುತ್ತದೆ.

ಆ. ಅತಿಥಿ ಉಪನ್ಯಾಸಕರು ಪ್ರತಿ ಮಾಹೆಯಲ್ಲಿ ಒಂದು ದಿವಸ ಸಾಂದರ್ಭಿಕ ರಜೆಯನ್ನು ಪಡೆಯಲು ಅರ್ಹರಿರುತ್ತಾರೆ ಮತ್ತು ಈ ರಜೆ ಅವಧಿಯ ಬೋಧನಾ ಕಾರ್ಯಭಾರವನ್ನು ಮುಂದಿನ ಮಾಹೆಯೊಳಗೆ ಸರಿದೂಗಿಸುವುದು.

ಇ. ಹಂಚಿಕೆಯಾಗಿರುವ ಬೋಧನಾ ತರಗತಿಗಳನ್ನು ತೆಗೆದುಕೊಳ್ಳಲು ವಿಫಲರಾದಲ್ಲಿ, ಗೈರುಹಾಜರಾದ ದಿನದ ಸಂಭಾವನೆಯನ್ನು ಕಡಿತಗೊಳಿಸಲಾಗುವುದು.